# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **449** |
| ಉತ್ತರಿಸಬೇಕಾದ ದಿನಾಂಕ | : | 13.08..2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ರಾಜೀವ್ ಗಾಂಧಿ ವಸತಿ ನಿಗಮದಡಿ ಯೋಜನೆಗಳಲ್ಲಿ ಅಕ್ರಮ ಭ್ರಷ್ಟಾಚಾರ ಮತ್ತು ಅನಿಯಮಿತತೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2024-25ನೇ ಸಾಲಿಗೆ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಮಂಜೂರಾದ 950 ಮನೆಗಳ ಹಂಚಿಕೆಯಲ್ಲಿ ಭ್ರಷ್ಟಾಚಾರ ನಡೆದಿದೇ ಎಂದು ಕೆಲ ದೃಶ್ಯ ಮಾಧ್ಯಮ ಹಾಗೂ ದಿನ ಪತ್ರಿಕೆಗಳಲ್ಲಿ ಪ್ರಕಟ/ಬಿತ್ತರಿಸಲಾಗಿರುತ್ತದೆ. |
| ಆ) | ಈ ಯೋಜನೆಗಳ ಅಡಿಯಲ್ಲಿ ಮನೆಗಳ ಹಂಚಿಕೆ ಹಣ ಬಿಡುಗಡೆ ಹಾಗೂ ಯೋಜನೆ ಅನುಷ್ಠಾನದಲ್ಲಿ ದುರುಪಯೋಗಗಳು ನಡೆದಿದೆಯೇ; | ಸದರಿ 950 ಮನೆಗಳ ಗುರಿಗೆ ನಿಗಮದಿಂದ ಅಂತಿಮ ಅನುಮೋದನೆಯಾಗಿರುವುದಿಲ್ಲ. ಆದುದರಿಂದ ಯಾವುದೇ ಹಣ ಬಿಡುಗಡೆಯಲ್ಲಿ ದುರುಪಯೋಗಗಳು ಆಗಿರುವುದಿಲ್ಲ. |
| ಇ) | ಈ ಸಂಬಂಧ ಇಲಾಖೆಯ ವತಿಯಿಂದ ಏನೆಲ್ಲಾ ತನಿಖೆ ಕೈಗೊಳ್ಳಲಾಗಿದೆ; ತನಿಖೆಯ ವರದಿ ಯಾವ ಹಂತದಲ್ಲಿದೆ; | ಯೋಜನೆ ಅನುಷ್ಠಾನದಲ್ಲಿ ದುರುಪಯೋಗಗಳು ನಡೆದಿದ್ದಲ್ಲಿ ಈ ಬಗ್ಗೆ ಪರಿಶೀಲಿಸಿ, ವರದಿ ನೀಡುವಂತೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ ಇವರಿಗೆ ಸೂಚಿಸಲಾಗಿರುತ್ತದೆ.<br><br>ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ ಇವರ ಹಂತದಲ್ಲಿ ತನಿಖಾ ಹಂತದಲ್ಲಿದೆ. |
| ಈ) | ಹೌಸಿಂಗ್ ಕಾರ್ಪೊರೇಷನ್‌ದಲ್ಲಿ ವಿವಿಧ ರೀತಿಯ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಕಲಬುರಗಿ ಜಿಲ್ಲೆ ಇವರು ನೀಡುವ ವರದಿಯಲ್ಲಿ ನ್ಯೂನತೆ/ಭ್ರಷ್ಟಾಚಾರ ನಡೆದಿರುವುದು ಕಂಡು ಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು. |

ಸಂಖ್ಯೆ: ವಇ 330 ಹೆಚ್‌ಎಎಂ 2025

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು